ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 10/05/2019

# ಕುಕ್ಕೆ ಸುಬ್ರಹ್ಮಣ್ಯ ದೇಗುಲಕ್ಕೆ ಚಿನ್ನದ ರಥ: ಸಂಪುಟ ಒಪ್ಪಿಗೆ

## ₹80 ಕೋಟಿ ವೆಚ್ಚದ ಪ್ರಸ್ತಾವಕ್ಕೆ ಆಡಳಿತಾತ್ಮಕ ಒಪ್ಪಿಗೆ

ಕ.ಪ್ರ 11/5/19

ಬೆಂಗಳೂರು: ರಾಜ್ಯದ ಪ್ರಸಿದ್ಧ ದೇವಾಲಯವಾದ ದಕ್ಷಿಣ ಕನ್ನಡ ಜಿಲ್ಲೆಯ ಕುಕ್ಕೆ ಸುಬ್ರಹ್ಮಣ್ಯ ದೇಗುಲಕ್ಕೆ ಚಿನ್ನದ ರಥ ನಿರ್ಮಾಣ ಮಾಡುವ ಸಂಬಂಧ ಪರಿಷ್ಕೃತ ಪ್ರಸ್ತಾವನೆಗೆ ಸಚಿವ ಸಂಪುಟ ಸಭೆಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಇಂದಿನ ಮಾರುಕಟ್ಟೆ ದರದಲ್ಲಿ ಚಿನ್ನದ ಬೆಲೆ, ನಿರ್ಮಾಣ ವೆಚ್ಚ ಸೇರಿ ಎಲ್ಲಾ ಅಂದಾಜುಗಳನ್ನು ಪರಿಷ್ಕರಿಸಿ ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾವನೆ ಮಂಡಿಸುವಂತೆ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು. ಅದರಂತೆ ಸುಮಾರು 80 ಕೋಟಿ ರು. ಎಂದು ಪರಿಷ್ಕರಿಸಿ ಅಂದಾಜು ಮೊತ್ತದ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ.

ಕುಕ್ಕೆ ಸುಬ್ರಹ್ಮಣ್ಯ ದೇವಾಲಯಕ್ಕೆ ಚಿನ್ನದ ರಥ ನೀಡುವ ಸಂಬಂಧ 2005ರಲ್ಲಿ ರಾಜ್ಯ ಸರ್ಕಾರವು ಅನುಮೋದನೆ ನೀಡಿದ್ದು, ಆಗ 15 ಕೋಟಿ ರು. ವೆಚ್ಚದಲ್ಲಿ ಚಿನ್ನದ ರಥ ನಿರ್ಮಿಸಲು ಉದ್ದೇಶಿಸಲಾಗಿತ್ತು. ಇದಕ್ಕಾಗಿ ದೇವಾಲಯದಲ್ಲಿ ಲಭ್ಯ ಇರುವ ಚಿನ್ನ ಬಳಸಿಕೊಂಡು ಉಳಿದ ಚಿನ್ನವನ್ನು ಬ್ಯಾಂಕ್ ಸಾಲದ ಮೂಲಕ ಖರೀದಿಸಲು ಸರ್ಕಾರ ಅನುಮತಿ ನೀಡಿತ್ತು. ರಥ ನಿರ್ಮಾಣಕ್ಕೆ ಸರ್ಕಾರದ ಅನುದಾನ ಬಳಸದೆ ಸಾರ್ವಜನಿಕರ ದೇಣಿಗೆ ಸಂಗ್ರಹ ಮತ್ತು ದೇವಾಲಯದ ಸಂಪನ್ಮೂಲಗಳಿಂದಲೇ ವೆಚ್ಚ ಭರಿಸಲಾಗುತ್ತದೆ ಎಂದು ಹೇಳಲಾಗಿದೆ.

೩